## 3 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ

**OS-76/2019** **PW-1**

**ದಿಃ 16.03.2021 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ**

ನನ್ನ ಆಧಾರ ಕಾರ್ಡನ್ನು ಹಾಜರು ಪಡಿಸಿದ್ದು ನಿಪಿ 15 ಎಂದು, ನನ್ನ ಶಾಲಾ ವರ್ಗಾವಣಾ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು ನಿಪಿ 16 ಎಂದು, ದಾವಾ ಆಸ್ತಿಯ ಬಾಬ್ತು ಎರಡು ಪಹಣಿ ಪತ್ರಿಕೆಗಳನ್ನು ಹಾಜರು ಪಡಿಸಿದ್ದು ನಿಪಿ 17 ಮತ್ತು 18 ಎಂದು ಆದ್ದರಿಂದ ನಾನು ದಾವೆಯಲ್ಲಿ ಕೇಳಿರುವಂತೆ ಆದೇಶ ಮಾಡಬೇಕೆಂದು ಪ್ರಾರ್ಥಿಸುತ್ತೇನೆ.

**ಪಾಟೀ ಸವಾಲುಃ 2 ನೇ ಪ್ರತಿವಾದಿ ಪರ ವಕೀಲರಿಂದಃ**

1. ನನ್ನ ಸಾಕ್ಷಿ ಪ್ರಮಾಣ ಪತ್ರಕ್ಕೆ ನಾನೇ ಮಾಹಿತಿ ನೀಡಿರುತ್ತೇನೆ. ನನ್ನ ತಂದೆಯ ಆಸ್ತಿಯಲ್ಲಿ ನನಗೂ ಪಾಲು ಬೇಕೆಂದು ಕೇಳಿಕೊಂಡು ನಾನು ಈ ದಾವೆಯನ್ನು ಸಲ್ಲಿಸಿರುತ್ತೇನೆ. ದಾವಾ ಆಸ್ತಿಯು ಪಿತ್ರಾರ್ಜಿತ ಆಸ್ತಿ ಎಂದು ತೋರಿಸಲು ನಾನು ದಾಖಲೆಗಳನ್ನು ಹಾಜರು ಪಡಿಸಿರುತ್ತೇನೆ. ದಾವಾ ಆಸ್ತಿಗಳು ಪಿತ್ರಾರ್ಜಿತ ಆಸ್ತಿಗಳು.

2. ನನ್ನ ತಂದೆಯವರಿಗೆ ಪಿತ್ರಾರ್ಜಿತ ಆಸ್ತಿಯು ವಾಟ್ನೀನಾತೆದಿಂದ ಬಂದಿರುತ್ತವೆ. ದಾವಾ ಆಸ್ತಿಗಳನ್ನು ನಾವೆಲ್ಲರೂ ಸಾಗುವಳಿ ಮಾಡುತ್ತಿದ್ದೇವೆ. ದಾವಾ ಆಸ್ತಿಗಳನ್ನು 3 ಹಾಗೂ 4 ನೇ ಪ್ರತಿವಾದಿಯರಿಗೆ ಮಾರಾಟ ಮಾಡಿದ ಬಗ್ಗೆ ಈ ದಾವೆಯನ್ನು ಸಲ್ಲಿಸುವ ಪೂರ್ವದಲ್ಲಿ ತಿಳಿಯಿತು. ಕೂಡಲೇ ನಾನು ಈ ದಾವೆಯನ್ನು ಸಲ್ಲಿಸಿರುತ್ತೇನೆ. ದಾವಾ ಆಸ್ತಿಯನ್ನು ಮಾರಾಟ ಮಾಡುವ ಸಮಯದಲ್ಲಿ ನಮ್ಮ ಮನೆತನಕ್ಕೆ ಯಾವದೇ ತೊಂದರೆ ಇರಲಿಲ್ಲ. 1 ನೇ ಪ್ರತಿವಾದಿಗೆ ಕೆಟ್ಟ ಹವ್ಯಾಸಗಳು ಇದ್ದವು. ಬೇರೆ ಯಾವದೇ ಹಣದ ಅಡಚಣೆಗಳು ಇರಲಿಲ್ಲ. 2 ನೇ ಪ್ರತಿವಾದಿಗೆ ತೊಂದರೆ ಕೊಡುವ ಉದ್ದೇಶದಿಂದ ಅವರ ವಿರುದ್ದ ಸುಳ್ಳು ದಾವೆ ಸಲ್ಲಿಸಿರುತ್ತೇನೆಂದರೆ ಸರಿಯಲ್ಲ.

**ಪಾಟೀ ಸವಾಲು** ಃ 3 ಮತ್ತು 4 ನೇ ಪ್ರತಿವಾದಿ ಪರ ವಕೀಲರು ಗೈರು

ಹಾಜರಿರುತ್ತಾರೆ. ಆದೇಶ ಪುಟವನ್ನು ಪರಿಶೀಲಿಸಿ ನೋಡಲಾಗಿ 3 ಮತ್ತು 4 ನೇ ಪ್ರತಿವಾದಿಯರು ತಮ್ಮ ಪ್ರತಿವಾದ ಪತ್ರವನ್ನು ಸಲ್ಲಿಸಿರುವದು ಕಂಡು ಬಂದಿರುವದಿಲ್ಲ. ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ನನ್ನ ಉಕ್ತಲೇಖದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

3 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ.